ಅಧ್ಯಕ್ಷರು: ಈಗ ವಿತ್ತೀಯ ಕಾರ್ಯಕಲಾಪದಲ್ಲಿ ಬೇಡಿಕೆಗಳನ್ನು ಮಂಡಿಸುತ್ತಾರೆ, ನಾಳೆ ಬೇಕಾದರೆ ಅದನ್ನು ಚರ್ಚೆಗೆ ತೆಗೆದುಕೊಳ್ಳೋಣ.

5. ವಿತ್ತೀಯ ಕಾರ್ಯಕಲಾಪ

2002-2003ನೇ ಸಾಲಿನ ಅನುದಾನ ಬೇಡಿಕೆಗಳು

ಬೇಡಿಕೆ ಸಂಖ್ಯೆ : 46 ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು): ಮಾನ್ಯ ಅಧ್ಯಕ್ಷರೆ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.3.2002 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್" ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 1,04,108.20 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 6,262.00 ಲಕ್ಷ ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲ್ಪಟ್ಟಿತು.

ಬೇಡಿಕೆ ಸಂಖ್ಯೆ: 01 ಕೃಷಿ (ಮಲೆನಾಡು ಅಭಿವೃದ್ಧಿ ಮಂಡಳಿ ಹೊರತುಪಡಿಸಿ)

ಶ್ರೀ ವಿ.ಎಸ್. ಕೌಜಲಗಿ(ಕೃಷಿ ಸಚಿವರು): ಮಾನ್ಯ ಅಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.3.2002ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಕೃಷಿ (ಮಲೆನಾಡು ಅಭಿವೃದ್ಧಿ ಮಂಡಳಿ ಹೊರತುಪಡಿಸಿ)" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 45,844.27 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 30.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ."

ಪ್ರಸ್ತಾವ ಮಂಡಿಸಲ್ಪಟ್ಟಿತು.

ಬೇಡಿಕೆ ಸಂಖ್ಯೆ: 02 ತೋಟಗಾರಿಕೆ

ಶ್ರೀ ಶಿವಣ್ಣ (ತೋಟಗಾರಿಕೆ ರಾಜ್ಯಸಚಿವರು):- ಮಾನ್ಯ ಅಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.3.2003ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ತೋಟಗಾರಿಕೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜ್ಯಸ್ವ ಖಾತೆಯಲ್ಲಿ 9,884.10 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ."

ಪ್ರಸ್ತಾಪ ಮಂಡಿಸಲ್ಪಟ್ಟಿತು

ಬೇಡಿಕೆ ಸಂಖ್ಯೆ: 03 ಪಶುಸಂಗೋಪನೆ

ಅಧ್ಯಕ್ಷರು: ಮಾನ್ಯ ಪಶು ಸಂಗೋಪನಾ ಸಚಿವರು ತಮ್ಮ ಬೇಡಿಕೆಗಳನ್ನು ಮಂಡಿಸುವುದು

ಶ್ರೀ ಪಿ.ಜಿ.ಆರ್. ಸಿಂಧ್ಯ:- ಮಾನ್ಯ ಅಧ್ಯಕ್ಷರೇ, ಈ ಬೇಡಿಕೆಗಳನ್ನು ಮಂಡಿಸತಕ್ಕ ಸನ್ನಿವೇಶದಲ್ಲಿ ಮಂತ್ರಿಗಳು ಇರಲಿಲ್ಲವೆಂದರೆ ಹೇಗೆ? ತಾವೇ ಹೇಳಿ, ಇವತ್ತು ಬೇಡಿಕೆಗಳು ಬರುತ್ತವೆ ಎಂಬುದು ಗೊತ್ತಿತ್ತು. ಇವತ್ತು ಸಾಯಂಕಾಲ ಬೇಡಿಕೆಗಳನ್ನು ಮಂಡಿಸಬೇಕು ಮತ್ತು ಚರ್ಚೆ ಮಾಡಬೇಕೆಂಬುದು ಗೊತ್ತಿದೆ. ಆದರೆ, ಈ ಸಂದರ್ಭದಲ್ಲಿ ಮಂತ್ರಿಗಳೇ ಇಲ್ಲವೆಂದರೆ ನಾವೇನು ಹೇಳುವುದು. ನಾನು ಹೇಳುತ್ತಾ ಇರುವುದು ಮಂತ್ರಿಗಳ ಸ್ವಭಾವದ ಬಗ್ಗೆ.

ಶ್ರೀ ಶಿವಣ್ಣ (ತೋಟಗಾರಿಕೆ ಸಚಿವರು):- ಮಾನ್ಯ ಅಧ್ಯಕ್ಷರೇ, ಮಾನ್ಯಮಂತ್ರಿಗಳು ಈಗತಾನೆ ಹೋದರು. ಹುಡ್ಕೋ ಬಗ್ಗೆ ತರ್ತು ಸಭೆ ಕರೆದಿದ್ದರು. ಅದಕ್ಕಾಗಿ ಹೋಗಿದ್ದಾರೆ. ಅವರ ಪರವಾಗಿ ನಾನು ಮಂಡಿಸುತ್ತಿದ್ದೇನೆ.

"ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.3.2003ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಪಶುಸಂಗೋಪನೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 17,027.12 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 10.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲ್ಪಟ್ಟಿತು

ಬೇಡಿಕೆ ಸಂಖ್ಯೆ: 53 ಸಕ್ಕರೆ

ಶ್ರೀ ಶಿವಣ್ಣ (ಮಾನ್ಯ ತೋಟಗಾರಿಕಾ ಸಚಿವರು) (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರ ಪರವಾಗಿ:-: ಮಾನ್ಯ ಅಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.3.2003ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಸಕ್ಕರೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 36.29 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 887.80 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಪ್ರಸ್ತಾಪ ಮಂಡಿಸಲ್ಪಟ್ಟಿತು

ಬೇಡಿಕೆ ಸಂಖ್ಯೆ: 04 - ಮೀನುಗಾರಿಕೆ, ಬಂದರು ಮತ್ತು ಪ್ರದೇಶಾಭಿವೃದ್ಧಿ

ಶ್ರೀ ವಸಂತ ವಿ. ಸಾಲಿಯಾನ(ಮೀನುಗಾರಿಕೆ ಮತ್ತು ಬಂದರು ಸಚಿವರು):- ಮಾನ್ಯ ಅಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.3.2003ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಮೀನುಗಾರಿಕೆ, ಬಂದರು ಮತ್ತು ಪ್ರದೇಶಾಭಿವೃದ್ಧಿ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 13,403,34 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 1,58.00 ಲಕ್ಷ ರೂ.ಗಳಿಗಿಂತ ಮೀರದ

ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲ್ಪಟ್ಟಿತು

ಬೇಡಿಕೆ ಸಂಖ್ಯೆ: 09 ಉನ್ನತ ಶಿಕ್ಷಣ

ಡಾ॥ ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.3.2003ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಉನ್ನತ ಶಿಕ್ಷಣ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 58,210.80 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 34.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ."

ಪ್ರಸ್ತಾವ ಮಂಡಿಸಲ್ಪಟ್ಟಿತು

ಬೇಡಿಕೆ ಸಂಖ್ಯೆ: 16 - (ವಿಜ್ಞಾನ ಮತ್ತು ತಂತ್ರಜ್ಞಾನ)

ಶ್ರೀಮತಿ ನಫೀಸಾ ಫಜಲ್(ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು): ಮಾನ್ಯ ಅಧ್ಯಕ್ಷರೇ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.3.2003ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ವಿಜ್ಞಾನ ಮತ್ತು ತಂತ್ರಜ್ಞಾನ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 162.75 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ ..... ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲ್ಪಟ್ಟಿತು

ಬೇಡಿಕೆ ಸಂಖ್ಯೆ: 10 - ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ವೃತ್ತಿಪರ ಶಿಕ್ಷಣ

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು, ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಪ್ರಾಥಮಿಕ ಶಿಕ್ಷಣ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.3.2003ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ವೃತ್ತಿಪರ ಶಿಕ್ಷಣ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 3,20,689.56 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 468.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲ್ಪಟ್ಟಿತು.

ಬೇಡಿಕೆ ಸಂಖ್ಯೆ: 59 - ವಯಸ್ಕರ ಶಿಕ್ಷಣ, ಗ್ರಂಥಾಲಯ

ಶ್ರೀ ಬಾಬೂರಾವ್ ಚೌಹಾಣ್(ಸನ್ಮಾನ್ಯ ವಯಸ್ಕರ ಶಿಕ್ಷಣ, ಗ್ರಂಥಾಲಯ ಮುದ್ರಣ ಮತ್ತು ಲೇಖನ ಸಾಮಾಗ್ರಿ ಸಚಿವರು): ಮಾನ್ಯ ಅಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.3.2003ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ವಯಸ್ಕರ ಶಿಕ್ಷಣ ಮತ್ತು ಸಾರ್ವಜನಿಕ ಗ್ರಂಥಾಲಯ "ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಪೂಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 2,806,70 ಲಕ್ಷ ರೂಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲ್ಪಟ್ಟಿತು

ಬೇಡಿಕೆ ಸಂಖ್ಯೆ: 11 ಮುದ್ರಣ ಮತ್ತು ಲೇಖನ ಸಾಮಾಗ್ರಿ

ಶ್ರೀ ಬಾಬೂರಾವ್ ಚಾಹಾಣ್ (ಸನ್ಮಾನ್ಯ ವಯಸ್ಕರ ಶಿಕ್ಷಣ, ಗ್ರಂಥಾಲಯ, ಮುದ್ರಣ ಮತ್ತು ಲೇಖನ ಸಾಮಾಗ್ರಿ ಸಚಿವರು):- ಮಾನ್ಯ ಅಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.3.2003ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಲೇಖನ ಸಾಮಾಗ್ರಿ ಮ್ತುತ ಮುದ್ರಣ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಪೂಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 3,237,49 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲ್ಪಟ್ಟಿತು

ಅಧ್ಯಕ್ಷರು: ಈಗ ಸದನವನ್ನು ಮುಂದೂಡುತ್ತಿದ್ದೇನೆ. ಸದನವು ಮತ್ತೆ ದಿನಾಂಕ: 12.7.2002 ರಂದು ಬೆಳಿಗ್ಗೆ 10.00 ಗಂಟೆಗೆ ಸಮಾವೇಶಗೊಳ್ಳುತ್ತದೆ.

(ಸದನವು 6.32ಕ್ಕೆ ಮುಂದೂಡಲ್ಪಟ್ಟು ಪುನಃ ದಿ. 12.7.2002 ರಂದು ಬೆಳಿಗ್ಗೆ ಹತ್ತು ಘಂಟೆಗೆ ಸಮಾವೇಶಗೊಳ್ಳಲು ನಿರ್ಧರಿಸಿತು).

+ ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ.

ಅನುಬಂಧ - 1

ಕೊಡಗು ಜಿಲ್ಲೆಯಲ್ಲಿ ರೇಷ್ಮೆ ಇಲಾಖೆಗೆ ಹಣ ಬಿಡುಗಡೆ

89(497): ಶ್ರೀ ಅಪ್ಪಚ್ಚುರಂಜನ್ ಎಂ.ಪಿ (ಸೋಮವಾರ ಪೇಟೆ): ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ

ಅ. ಕೊಡಗು ಜಿಲ್ಲೆಗೆ ರೇಷ್ಮೆ ಇಲಾಖೆಯ ವಿವಿಧ ಯೋಜನೆಗಳಿಗಾಗಿ ಹಾಗೂ ವಿವಿಧ ಉದ್ದೇಶಗಳಿಗಾಗಿ ಬಿಡುಗಡೆ ಮಾಡಿರುವ ಹಣ ಎಷ್ಟು;

ಆ. ರೇಷ್ಮೆ ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಇಲಾಖೆಯು ಹಮ್ಮಿಕೊಂಡ ಕಾರ್ಯ ಕ್ರಮಗಳಾವುವು;